ಕೆಲವು ಘಟಕಗಳಿಂದ ಪೊಲೀಸ್ ಪೇದೆ ಹುದ್ದೆಗಳು ಸೇರಿದಂತೆ ಹೆಚ್ಚುವರಿ ಸಿಬ್ಬಂದಿಯ ಮಂಜೂರಾತಿಗಾಗಿ ಬೇಡಿಕೆಗಳು ಇರುತ್ತವೆ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

17, (3) ಶ್ರೀ ಕುಮಾರ್ ಬಂಗಾರಪ್ಪ. ಎಸ್ (ಸೊರಬ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಶಿವಮೊಗ್ಗ ಗಂಗಾಮೂಲ ತಡಸ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿಪಡಿಲು ಯೋಜನೆಯನ್ನು ಸಿದ್ಧಪಡಿಲಾಗಿದೆಯೇ;

ಆ) ಯಾವ ನೆರವಿನಡಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ;

ಇ) ಈ ಯೋಜನೆಯಡಿ ಬರುವ ಭಾರಿ ಗಾತ್ರದ ಸೇತುವೆಗಳೆಷ್ಟು;

ಈ) ಸೊರಬ ತಾಲ್ಲೂಕು ಹಿರೇಕಲಗೋಡು ಮತ್ತು ಹಲಸಿನಕೊಪ್ಪ ಸ್ಥಳಗಳಲ್ಲಿ ಅತಿ ಅವಶ್ಯವಾಗಿರುವಂತಹ ಸೇತುವೆಗಳನ್ನು ಯೋಜನೆಯಲ್ಲಿ ಸೇರಿಸಲಾಗಿದೆಯೇ;

ಉ) ಈ ಎರಡೂ ಸೇತುವೆಗಳೂ ಸೇರಿದಂತೆ ಇನ್ನು ಹಲವು ಭಾರಿ ಗಾತ್ರದ ಸೇತುವೆಗಳ ನಿರ್ಮಾಣ ಕಾರ್ಯದ ಬಗ್ಗೆ ಲೋಕೋಪಯೋಗಿ ಇಲಾಖೆಯ ಪಾತ್ರವಿದೆಯೇ; ಹಾಗಿಲ್ಲದಿದ್ದಲ್ಲಿ ಇದರ ಅವಶ್ಯಕತೆಯ ಬಗ್ಗೆ ಸರ್ಕಾರ ಚಿಂತಿಸುವುದೇ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಕೈಗೊಳ್ಳಲಾದ ರಾಜ್ಯ ಹೆದ್ದಾರಿ ನಿರ್ವಹಣೆ ವಿಭಾಗದ ಪ್ಯಾಕೇಜ್–1 ಮತ್ತು 2 ರಲ್ಲಿ ಈ ರಸ್ತೆಯನ್ನು ಮೂರು ವರ್ಷಗಳ ನಿರ್ವಹಣೆಗಾಗಿ ತೆಗೆದುಕೊಳ್ಳಲಾಗಿದೆ.

ಸದರಿ ರಸ್ತೆಯ ಕಾಮಗಾರಿಯನ್ನು ಈಗ ಪಡುಬಿದ್ರಿ ಚಿಕ್ಕಲಗೋಡು ರಾಜ್ಯ ಹೆದ್ದಾರಿ ಸಂಖ್ಯೆ–1 ಎಂದು ಮರುನಾಮಕರಣ ಮಾಡಲಾಗಿದೆ.

ಈ ರಸ್ತೆಯು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ, ಹೊಸನಗರ, ಸಾಗರ, ಶಿಕಾರಿಪುರ ಮತ್ತು ಸೊರಬ ತಾಲ್ಲೂಕುಗಳಲ್ಲಿ ಹಾದು ಹೋಗುತ್ತದೆ. ಈ ರಸ್ತೆಯ ಒಟ್ಟು ಉದ್ದ 162.70 ಕಿ.ಮೀ. ಇರುತ್ತದೆ. ಸದರಿ ಯೋಜನೆಯಲ್ಲಿ ಈ ರಸ್ತೆಯನ್ನು ಕೆಳಕಂಡಂತೆ ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ.

ಸಾಮಾನ್ಯ ನಿರ್ವಹಣೆ – 162.7 ಕಿ.ಮೀ.

ಮರುಡಾಂಬರೀಕರಣ – 88.3 ಕಿ.ಮೀ.

ಆ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಕೈಗೊಳ್ಳಲಾದ ರಾಜ್ಯ ಹೆದ್ದಾರಿ ನಿರ್ವಹಣೆ ಅಭಿವೃದ್ಧಿ 2005–08ರ ಯೋಜನೆಯಡಿಯಲ್ಲಿ ಶಿವಮೊಗ್ಗ ವಿಭಾಗದ ಪ್ಯಾಕೇಜ್–1 ಮತ್ತು 2 ರಲ್ಲಿ ಈ ರಸ್ತೆಯನ್ನು ನಿರ್ವಹಣೆಗಾಗಿ ತೆಗೆದುಕೊಳ್ಳಲಾಗಿದೆ.

ಇ) ಈ ರಸ್ತೆಯಲ್ಲಿ ಶಿಕಾರಿಪುರ ತಾಲ್ಲೂಕು ಕಿ.ಮೀ. 171.4ರಲ್ಲಿ ಹಾಗೂ ತೀರ್ಥಹಳ್ಳಿ ತಾಲ್ಲೂಕಿನ ಕಿ.ಮೀ.2.95ರಲ್ಲಿ ಎರಡು ಸೇತುವೆಗಳನ್ನು ಕ್ರಮವಾಗಿ 20.00 ಮತ್ತು 25.00 ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಎರಡನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ ತೆಗೆದುಕೊಂಡಿದ್ದು, ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸಲಾಗುತ್ತಿದೆ.

ಅಲ್ಲದೇ, ಮೂರನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ ಕಿ.ಮೀ. 116.80 ರಲ್ಲಿ ರೂ.65.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸೇತುವೆ ನಿರ್ಮಾಣ ಮಾಡಲು ಯೋಜಿಸಿದೆ.

ಈ) ಸೊರಬ ತಾಲ್ಲೂಕು ಹಿರೇಕಲಗೋಡು ಸೇತುವೆಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಿಂದ ತೆಗೆದುಕೊಳ್ಳಲಾಗುತ್ತಿರುವ ಮೂರನೇ ಹಂತದ ಸೇತುವೆ ನಿರ್ಮಾಣ ಕಾಮಗಾರಿಯಲ್ಲಿ ರೂ. 140.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಳ್ಳಲು ಯೋಜಿಸಲಾಗಿದೆ ಮತ್ತು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಉ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ 2ನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ, ಶಿವಮೊಗ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 14 ಸೇತುವೆಗಳನ್ನು ರೂ.855 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಂಡಿದ್ದು ಕಾಮಗಾರಿ ಪ್ರಗತಿಯಲ್ಲಿದೆ.

ಅಲ್ಲದೇ, 3ನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ 14 ಸೇತುವೆಗಳನ್ನು ರೂ.1178 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಳ್ಳಲಾಗಿದೆ. ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

18, (89) ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ (ಬೆಳ್ಳಾವಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನಲ್ಲಿ ಬಡವನ ಹಳ್ಳಿಯಲ್ಲಿ ಪೊಲೀಸ್ ವಿಭಾಗದ ಹೊರ ಚೌಕಿ ಠಾಣೆ (ಔಟ್ ಪೊಲೀಸ್ ಸ್ಟೇಷನ್) ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ?

ಆ) ಈ ಪ್ರಸ್ತಾವನೆ ಸರ್ಕಾರದ ಮುಂದಿದ್ದಲ್ಲಿ ಯಾವಾಗ ಪ್ರಾರಂಭವಾಗಬಹುದು?